**Akashvani : Bangalore**
**Regional Bulletin In Kannada**
**06.07.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**06.07.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ರಾಜ್ಯದಲ್ಲಿ ಎಸ್ಐಆರ್ ಪ್ರಕ್ರಿಯೆಯಲ್ಲಿ ಅಕ್ರಮ ಆರೋಪ- ಮುಖ್ಯ ಚುನಾವಣಾಧಿಕಾರಿಗೆ ದೂರು ನೀಡಿದ ಎನ್‌ಡಿಎ ನಿಯೋಗ**

**೨. ಎಸ್ಐಆರ್ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರ ಮಧ್ಯಪ್ರವೇಶ ಮಾಡಿಲ್ಲ -ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ**

**೩. ಬೆಂಗಳೂರಿನ ಮಲ್ಲೇಶ್ವರಂನಲ್ಲಿ ಪಾದಚಾರಿ ಸುರಂಗ ಮಾರ್ಗದ ನಿರ್ಮಾಣಕ್ಕೆ ಕೇಂದ್ರ ಸಚಿವ ವಿ.ಸೋಮಣ್ಣ ಶಂಕುಸ್ಥಾಪನೆ**

**೪. ಕೊಡಗು ಜಿಲ್ಲೆಯಲ್ಲಿ ಬಿರುಸುಗೊಂಡ ಮಳೆ; ಕೆಆರ್‌ಎಸ್ ಜಲಾಶಯದ ಒಳ ಹರಿವಿನಲ್ಲಿ ಹೆಚ್ಚಳ**

**೫. ಇಂದು ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನ್ ರಾಮ್ ಪುಣ್ಯಸ್ಮರಣೆ; ಗಣ್ಯರಿಂದ ಗೌರವ ನಮನ**

**<><*<><>*><>**

ರಾಜ್ಯದಲ್ಲಿ ನಡೆಯುತ್ತಿರುವ ಎಸ್ಐಆರ್ ಪ್ರಕ್ರಿಯೆಲ್ಲಿನ ಅಕ್ರಮಗಳ ಕುರಿತಂತೆ ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ, ಪ್ರಲ್ಹಾದ್ ಜೋಶಿ, ಶೋಭಾ ಕರಂದ್ಲಾಜೆ, ಪ್ರತಿಪಕ್ಷ ನಾಯಕ ಆರ್.ಅಶೋಕ ಸೇರಿದಂತೆ ಹಲವು ಮುಖಂಡರು ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ದೂರು ನೀಡಿದ್ದಾರೆ. ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್ ಅವರಿಗೆ ಬರೆದ ಪತ್ರದಲ್ಲಿ ಐದು ದಿನಗಳಿಂದ ಎಸ್ಐಆರ್ ಪ್ರಕ್ರಿಯೆಯಲ್ಲಿನ ಅಕ್ರಮಗಳಿಗೆ ರಾಜ್ಯ ಸರ್ಕಾರವೇ ಕುಮ್ಮಕ್ಕು ನೀಡುತ್ತಿದೆ. ಅಧಿಕಾರಿಗಳನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಸರ್ಕಾರವನ್ನು ಖುಷಿಪಡಿಸುವ ರೀತಿಯಲ್ಲಿ ಅಧಿಕಾರಿಗಳೂ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ದೂರಿದ್ದಾರೆ. ಆಯೋಗದ ಮಾರ್ಗಸೂಚಿಗಳನ್ನು ಉಲ್ಲಂಘಿಸಿದ ಅಧಿಕಾರಿಗಳು ಮತ್ತು ರಾಜಕೀಯ ಕಾರ್ಯಕರ್ತರ ವಿರುದ್ಧ ಕಠಿಣಕ್ರಮ ಕೈಗೊಳ್ಳಬೇಕು. ಎಂದು ಒತ್ತಾಯಿಸಿದ್ದಾರೆ. ರಾಜ್ಯದ ಹಲವು ಭಾಗಗಳಲ್ಲಿ ಬಿಎಲ್‌ಒಗಳು ಮನೆ ಮನೆಗೆ ತೆರಳಿ ಪರಿಶೀಲನೆ ನಡೆಸುತ್ತಿಲ್ಲ ಎಂದು ಆರೋಪಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ನಡೆಯುತ್ತಿರುವ ಎಸ್ಐಆರ್ ಪ್ರಕ್ರಿಯೆಯಲ್ಲಿ ಸರ್ಕಾರ ಮಧ್ಯಪ್ರವೇಶಿಸಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಆಯೋಗ, ಈ ಅಭಿಯಾನ ನಡೆಸುತ್ತಿರುವ ರೀತಿಯ ಬಗ್ಗೆ ತಮಗೆ ಭಿನ್ನಾಭಿಪ್ರಾಯವಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಎಲ್ಲರಿಗೂ ಮತದಾನದ ಹಕ್ಕು ಸಿಗಬೇಕು ಎಂಬ ಉದ್ದೇಶದಿಂದ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ. ರಾಜ್ಯ ಸರ್ಕಾರ ಚುನಾವಣಾ ಆಯೋಗಕ್ಕೆ ಎಲ್ಲಾ ರೀತಿಯ ಸಹಕಾರ ನೀಡಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ( ೩೩ ಸೆಕೆಂಡ್ಸ್)**

ಎಲ್ಲಾ ರಾಜಕೀಯ ಪಕ್ಷಗಳಿಗೂ ಬಿಎಲ್ಒಗಳನ್ನು ನೇಮಕ ಮಾಡುವ ಅವಕಾಶವಿದೆ. ಜನರು ತಮ್ಮ ಮತದಾನದ ಹಕ್ಕನ್ನು ಉಳಿಸಿಕೊಳ್ಳಬೇಕು ಎಂಬ ಕಾರಣಕ್ಕೆ ಜಾಗೃತಿ ಮೂಡಿಸುವ ಕೆಲಸ ಸರ್ಕಾರ ಮಾಡುತ್ತಿದ್ದು, ವಿಪಕ್ಷಗಳಲ್ಲಿ ಭಯ ಉಂಟು ಮಾಡಿದೆ ಎಂದು ತಿಳಿಸಿದ್ದಾರೆ.

<><*<><>*><>

ಪಾದಚಾರಿ ಸುರಂಗ ಮಾರ್ಗ ನಿರ್ಮಾಣಕ್ಕೆ ೭ ತಿಂಗಳ ಕಾಲಾವಕಾಶ ಬೇಕಾಗಿದ್ದು, ಎಲ್ಲರ ಸಹಕಾರ ದೊರೆತರೆ ಕೇವಲ ೪ ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ಕೇಂದ್ರ ರಾಜ್ಯ ರೈಲ್ವೆ ಮತ್ತು ಜಲಶಕ್ತಿ ಖಾತೆ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಬೆಂಗಳೂರಿನ ಮಲ್ಲೇಶ್ವರಂ ಮಂತ್ರಿಮಾಲ್ ಹಿಂಭಾಗದ ಪಾದಚಾರಿ ಸುರಂಗ ಮಾರ್ಗದ ನಿರ್ಮಾಣಕ್ಕೆ ಶಂಕು ಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು,  ದೇಶದಲ್ಲಿ ಬೆಂಗಳೂರು ಆರ್ಥಿಕವಾಗಿ ಅಭಿವೃದ್ಧಿಯಾದರೆ ಮಾತ್ರ ರಾಜ್ಯಕ್ಕೆ ಬಂಡವಾಳ ಹರಿದುಬರಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ದೇಶದಲ್ಲಿ ‘ಸ್ವಚ್ಛ ಭಾರತ‘ ಎನ್ನುವುದು ಇಂದು ಸಾರ್ವಜನಿಕರ ಅಭಿಯಾನವಾಗಿ ಬದಲಾಗಿದೆ ಎಂದು ಪೆಟ್ರೋಲಿಯಂ, ನೈಸರ್ಗಿಕ ಅನಿಲ ಮತ್ತು ಪ್ರವಾಸೋದ್ಯಮ ಖಾತೆ ರಾಜ್ಯ ಸಚಿವ ಸುರೇಶ್ ಗೋಪಿ ಅಭಿಪ್ರಾಯಪಟ್ಟಿದ್ದಾರೆ. ಮಂಗಳೂರಿನ ಎಂಆರ್‌ಪಿಎಲ್ ಮತ್ತು ರಾಮಕೃಷ್ಣ ಮಠದ ನೇತೃತ್ವದಲ್ಲಿ ಸ್ವಚ್ಛತಾ ಅಭಿಯಾನದ ಅಂಗವಾಗಿ ಕದ್ರಿ ಉದ್ಯಾನವನದ ಪರಿಸರದಲ್ಲಿಂದು ವಿಶೇಷ ಸ್ವಚ್ಛತಾ ಶ್ರಮದಾನಕ್ಕೆ  ಚಾಲನೆ ನೀಡಿ ಮಾತನಾಡಿದ ಅವರು, ವಿಶ್ವಕ್ಕೆ ಸ್ವಚ್ಛ ಸುಂದರ ಭಾರತವನ್ನು ನೀಡುವುದು ಪ್ರಧಾನಿ ನರೇಂದ್ರ ಮೋದಿಯವರ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ. ಸಾರ್ವಜನಿಕರ ಪಾಲುದಾರಿಕೆ ಇಲ್ಲದಿದ್ದರೆ ಸ್ವಚ್ಛತೆ ಸಾಧ್ಯವಿಲ್ಲ. ಹೀಗಾಗಿ ಸ್ವಚ್ಛತೆ ಕಾಪಾಡುವುದು ಸಾರ್ವಜನಿಕರ ಕರ್ತವ್ಯ ಮತ್ತು ಜವಾಬ್ದಾರಿ ಎಂದು ಅವರು ಹೇಳಿದ್ದಾರೆ.

<><*<><>*><>

ಕೊಡಗು ಜಿಲ್ಲೆಯಲ್ಲಿ ಇಂದು ಬೆಳಗ್ಗಿನಿಂದಲೇ ಮಳೆ ಹಾಗೂ ಗಾಳಿ ಬಿರುಸಾಗಿದೆ. ಸುಮಾರು ೧ ತಿಂಗಳು ತಡವಾಗಿ ಪ್ರಾರಂಭವಾಗಿರುವ ಮುಂಗಾರು ತೀವ್ರತೆ ಇಂದಿನಿಂದ ಹೆಚ್ಚಾಗಿದೆ. ಇಂದು ಬೆಳಗ್ಗಿನಿಂದಲೇ ಮಡಿಕೇರಿ ನಗರದಲ್ಲಿ ಎಡೆಬಿಡದೆ ಮಳೆ ಸುರಿಯುತ್ತಿದ್ದು, ಗಾಳಿಯ ತೀವ್ರತೆ ಕೂಡ ಹೆಚ್ಚಾಗಿದೆ. ವಿರಾಜಪೇಟೆ ತಾಲೂಕಿನ ಬೇಟೋಳಿ ಗ್ರಾಮದ ನಿವಾಸಿ ಸಿಂಧು ಎಂಬುವವರ ಮೇಲೆ ಗಾಳಿಯಿಂದಾಗಿ ಮರ ಬಿದ್ದು ತೀವ್ರ ಗಾಯಗಳಾಗಿದೆ.  ಪ್ರಾಣಾಪಾಯದಿಂದ ಪಾರಾಗಿರುವ ಸಿಂಧು ಅವರನ್ನು ಮಡಿಕೇರಿಯ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

<><*<><>*><>

ಕೊಡಗು ಜಿಲ್ಲೆ ಸೇರಿದಂತೆ ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆ ಪ್ರಮಾಣ ಸ್ವಲ್ಪ ಹೆಚ್ಚಾಗಿರುವುದರಿಂದ ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಜಲಾಶಯದ ಒಳ ಹರಿವಿನಲ್ಲಿ ಸ್ವಲ್ಪ ಚೇತರಿಕೆ ಕಂಡಿದೆ. ಕಳೆದ ಮೂರು ದಿನಗಳ ಹಿಂದೆ ೯೦೦ ಕ್ಯೂಸೆಕ್ ಇದ್ದ ನೀರಿನ ಒಳ ಹರಿವು ೧೦೯೫ ಕ್ಯೂಸೆಕ್ ಗೆ ಏರಿದ್ದು, ಇಂದು ೧೪೪೯ ಕ್ಯೂಸೆಕ್ ನಷ್ಟು ಒಳ ಹರಿವು ಹೆಚ್ಚಾಗಿದೆ. ೧೨೪.೮೦ ಅಡಿ ನೀರಿನ ಮಟ್ಟ ಹೊಂದಿರುವ ಕೆ.ಆರ್.ಎಸ್. ಅಣೆಕಟ್ಟೆಯಲ್ಲಿ ಪ್ರಸ್ತುತ ೮೦.೯೦ ಅಡಿ ನೀರಿದೆ. ಮತ್ತಷ್ಟು ನೀರಿನ ಪ್ರಮಾಣ ಏರಿಕೆ ಕಂಡರೆ ಮಂಡ್ಯ, ಬೆಂಗಳೂರು, ಮೈಸೂರು ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳಿಗೆ ಕುಡಿಯುವ ನೀರಿನ ಅಭಾವ ಕಡಿಮೆಯಾಗಲಿದೆ.

<><*<><>*><>

ಕೊಡಗು ಜಿಲ್ಲೆಯಲ್ಲಿ ಅತಿವೃಷ್ಟಿ ಹಾಗೂ ಅನಾವೃಷ್ಟಿ ಎದುರಿಸಲು ಸಜ್ಜಾಗುವಂತೆ ಪ್ರಾಕೃತಿಕ ವಿಕೋಪ ನಿರ್ವಹಣೆಯ ಮೇಲುಸ್ತುವಾರಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ನಿರ್ದೇಶನ ನೀಡಿದ್ದಾರೆ. ಮಡಿಕೇರಿಯಲ್ಲಿ ಪ್ರಾಕೃತಿಕ ವಿಕೋಪ ನಿರ್ವಹಣೆ ಸಂಬಂಧ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕೊಡಗು ಜಿಲ್ಲೆಯಲ್ಲಿ ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ ಮಳೆಯ ಪ್ರಮಾಣ ಕಡಿಮೆಯಾಗಿದೆ.   ಜುಲೈ ಮತ್ತು ಆಗಸ್ಟ್ ತಿಂಗಳಿನಲ್ಲಿ ವಾಡಿಕೆ ಮಳೆಯಾಗುವ ನಿರೀಕ್ಷೆ ಇದೆ. ಆದ್ದರಿಂದ ಪ್ರಾಕೃತಿಕ ವಿಕೋಪ ಎದುರಿಸಲು ಸಜ್ಜಾಗಬೇಕು. ಜೊತೆಗೆ 'ಎಲ್ ನಿನೊ' ಪರಿಣಾಮದಿಂದ ಕಡಿಮೆ ಮಳೆಯಾದಲ್ಲಿ ಅನಾವೃಷ್ಠಿಯನ್ನೂ ಸಹ ಎದುರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ಪ್ರಾಕೃತಿಕ ವಿಕೋಪ ಎದುರಿಸಲು ಜಿಲ್ಲಾಧಿಕಾರಿಯವರ ಪಿ.ಡಿ. ಖಾತೆಯಲ್ಲಿ ೩ ಕೋಟಿ ೫ ಲಕ್ಷ ರೂಪಾಯಿ ಇದ್ದು, ೫ ತಾಲ್ಲೂಕುಗಳ ತಹಶೀಲ್ದಾರ್‌ಗಳ ಪಿ.ಡಿ. ಖಾತೆಯಲ್ಲಿ ಒಟ್ಟು ೧ ಕೋಟಿ ೪೧ ಲಕ್ಷದ ೩೯ ಸಾವಿರ ರೂಪಾಯಿ ಲಭ್ಯವಿದೆ ಎಂದು ತಿಳಿಸಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಕಳೆದ ರಾತ್ರಿಯಿಂದ ಧಾರಾಕಾರ ಮಳೆಯಾಗುತ್ತಿದೆ. ಜಿಲ್ಲೆಯ ಚಿಕ್ಕಮಗಳೂರು, ಮುಡಿಗೆರೆ, ಕಳಸ ತಾಲೂಕಿನಾದ್ಯಂತ ಹಾಗೂ ಚಾರ್ಮಾಡಿ, ಬಾಳೂರು,

ಗೋಣಿಬೀಡು ಸುತ್ತ ಮುತ್ತ ಇಂದು ಮುಂಜಾನೆಯಿಂದ ಗಾಳಿ ಸಹಿತ ಮಳೆಯಾಗುತ್ತಿದೆ. ಹಲವೆಡೆ ರಸ್ತೆಗೆ ಮರ ಉರುಳಿಬಿದ್ದು ವಾಹನ ಸಂಚಾರಕ್ಕೆ ಸಮಸ್ಯೆ ಉಂಟಾಗಿದೆ. ಮುಂಜಾಗ್ರತ ಕ್ರಮವಾಗಿ ಮೂಡಿಗೆರೆ ತಾಲೂಕಿನ ಅಂಗನವಾಡಿ ಕೇಂದ್ರಗಳು, ಪ್ರಾಥಮಿಕ ಹಾಗು ಪ್ರೌಢ ಶಾಲೆಗಳಿಗೆ ತಹಶಿಲ್ದಾರ್ ರಜೆ ಘೋಷಣೆ ಮಾಡಿದ್ದಾರೆ.

**<><*<><>*><>**

ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ್‌ರಾಮ್ ಅವರ ಪುಣ್ಯಸ್ಮರಣೆ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ಪ್ರತಿಮೆಗೆ ಇಂದು ಮಾಲಾರ್ಪಣೆ ಮಾಡಿದರು. ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಚಿವರಾದ ಕೆ.ಎಚ್.ಮುನಿಯಪ್ಪ, ಡಾ.ಯತೀಂದ್ರ ಸಿದ್ದರಾಮಯ್ಯ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು. ಕಲಬುರಗಿಯಲ್ಲಿರುವ ಬಾಬು ಜಗಜೀವನ್ ರಾಮ್ ಅವರ ಪ್ರತಿಮೆಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಮಾಲಾರ್ಪಣೆ ಮಾಡಿ ಗೌರವ ಸಮರ್ಪಣೆ ಸಲ್ಲಿಸಿದರು. ಸಾಮಾಜಿಕ ನ್ಯಾಯದ ಹರಿಕಾರ, ಮಾಜಿ ಉಪ ಪ್ರಧಾನಿ ಡಾ.ಜಗಜೀವನ ರಾಮ್ ೪೦ನೇ ಪುಣ್ಯ ತಿಥಿ ಹಿನ್ನಲೆಯಲ್ಲಿ ಮಂಡ್ಯ ಜಿಲ್ಲಾಡಳಿತದ ವತಿಯಿಂದ ಮಂಡ್ಯ ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿರುವ ಬಾಬು ಜಗಜೀವನ್ ರಾಂ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಶಾಸಕ ಎನ್.ಚಲುವರಾಯಸ್ವಾಮಿ ಅವರು ಗೌರವ ನಮನ ಸಲ್ಲಿಸಿದ್ದು, ಡಾ. ಬಾಬು ಜಗಜೀವನ ರಾಮ್ ಕೇವಲ ರಾಜಕಾರಣಿಯಲ್ಲ, ಅವರು ಒಂದು ಶಕ್ತಿ ಎಂದು ಬಣ್ಣಿಸಿದರು. ಚಾಮರಾಜನಗರ ಜಿಲ್ಲಾ ಕೇಂದ್ರ ಸೇರಿದಂತೆ ಗುಂಡ್ಲುಪೇಟೆ, ಹನೂರು ಮತ್ತು ಕೊಳ್ಳೇಗಾಲ ತಾಲೂಕು ಕೇಂದ್ರಗಳಲ್ಲಿ ಹಸಿರುಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾಂ ಪುಣ್ಯ ಸ್ಮರಣೆ ನಡೆಯಿತು. ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಶಾಸಕ ಪುಟ್ಟರಂಗಶೆಟ್ಟಿ ಮಾಲಾರ್ಪಣೆ ಮಾಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**